## ತಾಳಕೇರಿ ನಾಲಾ ಹೂಳೆತ್ತುವ ಕಾಮಗಾರಿ ಸ್ಥಳದಲ್ಲಿ ಸ್ವೀಪ್ ಜಾಗೃತಿ ಕಾರ್ಯಕ್ರಮ
# ಮೇ 7 ರಂದು ಎಲ್ಲರೂ ಮತದಾನ ಮಾಡಿ: ಹನಮಂತಗೌಡ ಪೊಲೀಸ್ ಪಾಟೀಲ್

ಕೊಪ್ಪಳ, ಏಪ್ರಿಲ್ 18 : ಪ್ರಜಾಪ್ರಭುತ್ವದ ಹಬ್ಬವನ್ನು ನರೇಗಾ ಕೂಲಿಕಾರರು ಸಂಭ್ರಮದಿಂದ ಆಚರಿಸಿ, ಮೇ 7 ರಂದು ನಡೆಯುವ ಲೋಕಸಭಾ ಚುನಾವಣೆಯ ಮತದಾನದಲ್ಲಿ ಕಡ್ಡಾಯವಾಗಿ ಮತದಾನ ಮಾಡಿ ಎಂದು ಯಲಬುರ್ಗಾ ತಾ.ಪಂ ಸಹಾಯಕ ನಿರ್ದೇಶಕರಾದ ಹನಮಂತಗೌಡ ಪೊಲೀಸ್ ಪಾಟೀಲ್ ಹೇಳಿದರು.



ತಾಲೂಕಿನ ತಾಳಕೇರಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಬರುವ ನಾಲಾ ಹೂಳೆತ್ತುವ ಕಾಮಗಾರಿ ಸ್ಥಳದಲ್ಲಿ ಜಿಲ್ಲಾ ಸ್ವೀಪ್ ಸಮಿತಿ, ತಾಲೂಕು ಸ್ವೀಪ್ ಸಮಿತಿ ವತಿಯಿಂದ ಹಮ್ಮಿಕೊಂಡಿದ್ದ ಮತದಾನ ಜಾಗೃತಿ ಸ್ವೀಪ್ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಕಳೆದ ಚುನಾವಣೆಯಲ್ಲಿ ನಿರಂತರವಾಗಿ ಸ್ವೀಪ್ ಕಾರ್ಯಕ್ರಮ ಹಮ್ಮಿಕೊಂಡಿದ್ದರಿಂದ ಶೇಕಡಾ 2 ರಷ್ಟು ಹೆಚ್ಚಿನ ಮತದಾನ 'ವಾಗಿತ್ತು. ಅದರಂತೆ ಈ ಬಾರಿಯೂ ತಾಳಕೇರಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಹೆಚ್ಚು ಮತದಾನವಾಗಬೇಕು. ನರೇಗಾ ಕೂಲಿಕಾರರು ಕಡ್ಡಾಯವಾಗಿ ಮತದಾನ ಮಾಡಬೇಕು. ಅಂದಿನ ದಿನ ನರೇಗಾ ಕೆಲಸಕ್ಕೆ ರಜೆ ನೀಡಲಾಗುವುದು ಎಂದು ತಿಳಿಸಿದರು.ಚುನಾವಣೆಯಲ್ಲಿ ಕಡ್ಡಾಯವಾಗಿ ಮತಗಟ್ಟೆ ಕೇಂದ್ರಕ್ಕೆ ಹೋಗಿ ಮತ ಚಲಾಯಿಸುವುದರ ಮೂಲಕ ಸುಭದ್ರ ದೇಶವನ್ನಾಗಿ ನಿರ್ಮಿಸೋಣ. ಮತದಾನ ದಿನದಂದು ನಾವು ಸಮಯ ವ್ಯರ್ಥ ಮಾಡದೆ ಚುನಾವಣೆ ಆಯೋಗ ನಿಗದಿಪಡಿಸಿದ ದಾಖಲೆಗಳನ್ನು ತೆಗೆದುಕೊಂಡು ಹೋಗಿ ಮತ ಚಲಾಯಿಸಬೇಕು ಎಂದರು.

ಈ ಸಂದರ್ಭ ಗ್ರಾಮ ಪಂಚಾಯತಿ ಪಿಡಿಒ ರಾಮಣ್ಣ ದೊಡ್ಡಮನಿ, ತಾ.ಪಂ ತಾಂತ್ರಿಕ ಸಂಯೋಜಕರಾದ ಸಂತೋಷ ನಂದಾಪುರ, ವಿಷಯ ನಿರ್ವಾಹಕರಾದ ಶೇಕಪ್ಪ ಉಪ್ಪಾರ, ಐಇಸಿ ಸಂಯೋಜಕರಾದ ಶರಣಪ್ಪ ಹಾಳಕೇರಿ, ಡಿಇಒ ಹನುಮಂತ, ಬಿಎಫ್‌ಟಿ ಶ್ರೀಕಾಂತ ಸಜ್ಜನ್, ಕಾಯಕ ಬಂಧುಗಳು, ಕೂಲಿಕಾರರು ಹಾಜರಿದ್ದರು.

# ಮೇ ಮಾಹೆಯಲ್ಲಿ ಮಾವು ಪ್ರದರ್ಶನ ಮತ್ತು ಮಾರಾಟ ಮೇಳ: ಹೆಸರು ನೋಂದಾಯಿಸಲು ರೈತರಿಗೆ ಸೂಚನೆ

ಕೊಪ್ಪಳ, ಏಪ್ರಿಲ್ : ಕೊಪ್ಪಳ ತೋಟಗಾರಿಕೆ ಇಲಾಖೆ ವತಿಯಿಂದ ಮೇ ತಿಂಗಳಿನಲ್ಲಿ 8ನೇ ಮಾವು ಪ್ರದರ್ಶನ ಮತ್ತು ಮಾರಾಟ ಮೇಳವನ್ನು ಆಯೋಜಿಸಲಾ ಗುತ್ತಿದ್ದು, ಮಳಿಗೆ ಕಾಯ್ದಿರಿಸಲು ಹೆಸರು ನೋಂದಾಯಿಸುವಂತೆ ಮಾವು ಬೆಳೆಗಾರರಿಗೆ ತಿಳಿಸಿದೆ. ತೋಟಗಾರಿಕೆ ಇಲಾಖೆ ಕೊಪ್ಪಳದಿಂದ ರೈತರಿಂದ ನೇರವಾಗಿ ಗ್ರಾಹಕರಿಗೆ ಜಿಲ್ಲೆಯಲ್ಲಿ ಬೆಳೆಯಲಾ ಗುತ್ತಿರುವ ಮಾವು ಬೆಳೆಗೆ ಉತ್ತಮ ಮಾರುಕಟ್ಟೆ ಒದಗಿಸುವ ಮತ್ತು ಕೊಪ್ಪಳ ಜಿಲ್ಲೆಯ ನಾಗರಿಕರಿಗೆ ಉತ್ತಮ ಗುಣಮಟ್ಟದ ಹಣ್ಣುಗಳನ್ನು, ಯೋಗ್ಯ ಬೆಲೆಗೆ ಯಾವುದೇ ಮಧ್ಯವರ್ತಿಗಳ ಹಾವಳಿ ಇಲ್ಲದೇ ರೈತರಿಂದ ನೇರವಾಗಿ ಗ್ರಾಹಕರಿಗೆ ಒದಗಿಸುವ ಉದ್ದೇಶದಿಂದ ಮೇ–2024 ರ ಮಾಹೆಯ 2 ನೇ ವಾರದಲ್ಲಿ ಮಾವು ಹಣ್ಣುಗಳ ಪ್ರದರ್ಶನ ಮತ್ತು ನೈಸರ್ಗಿ ಕವಾಗಿ ಮಾಗಿಸಿದ ಮಾವಿನ ಹಣ್ಣುಗಳ ಮಾರಾಟ ಮೇಳವನ್ನು ಆಯೋಜಿಸಲು ನಿರ್ಧರಿಸ ಲಾಗಿದೆ. ಈ ಮೇಳದಲ್ಲಿ ಭಾಗವಹಿಸುವ ಜಿಲ್ಲೆಯ ಆಸಕ್ತ ಮಾವು ಬೆಳೆಗಾರರು ನೈಸರ್ಗಿಕವಾಗಿ ಮಾಗಿಸಿದ ಮಾವಿನ ಹಣ್ಣುಗಳನ್ನು ಮಾರಾಟ ಮಾಡಲು ಮುಂಗಡವಾಗಿ ಮಾರಾಟ ಮಳಿಗೆಗಳನ್ನು ಕಾಯ್ದಿರಿಸಲು ತಮ್ಮ ಹೆಸರನ್ನು ನೋಂದಾಯಿ ಸಬೇಕು.ಮೊದಲು ಬಂದವರಿಗೆ ಆದ್ಯತೆ ನೀಡಲಾ ಗುವುದು. ಆಸಕ್ತ ರೈತರು ತಮ್ಮ ಪಹಣಿ ಪ್ರತಿಯೊಂ ದಿಗೆ, ತಮ್ಮ ಹೆಸರು, ವಿಳಾಸ, ಸರ್ವೆ ನಂಬರ್, ಬೆಳೆ, ತಳಿಗಳು ಹಾಗೂ ವಿಸ್ತೀರ್ಣ ಮುಂತಾದ ವಿವರಗಳೊಂದಿಗೆ ನೋಂದಣಿ ಮಾಡಿಕೊಳ್ಳಬೇಕು. ಹೆಸರು ನೋಂದಾಯಿಸಲು ಹಾಗೂ ಹೆಚ್ಚಿನ ಮಾಹಿತಿಗಾಗಿ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ಜಿಪಂ), ಕೊಪ್ಪಳ ಮೊ:9448 511649, ಗಂಗಾವತಿ ಮೊ:94489 10277, ಕುಷ್ಟಗಿ ಮೊ:886169 7989, ಯಲಬುರ್ಗಾ ಮೊ:9945644338, ಕೇಂದ್ರ ಸ್ಥಾನಿಕ ಸಹಾಯಕರು, ತೋಟಗಾರಿಕೆ ಉಪನಿರ್ದೇಶಕರ ಕಛೇರಿ (ಜಿಪಂ) ಕೊಪ್ಪಳ. ಮೊ:9741057047, ತೋಟಗಾರಿಕೆ ಕಿಸಾನ ಕೇರ್ ಸೆಂಟರ್ ಕೊಪ್ಪಳ 9902792635 ಇವರನ್ನು ಸಂಪರ್ಕಿಸಬಹುದು. ತಮ್ಮ ಉತ್ಪನ್ನಗಳಿಗೆ ಯೋಗ್ಯ ಬೆಲೆ ದೊರೆಯಲು ಹಾಗೂ ನೇರವಾಗಿ ಗ್ರಾಹಕರಿಗೆ ಮಾರಾಟ ಮಾಡಲು ರೈತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ತೋಟಗಾರಿಕೆ ಉಪನಿರ್ದೇಶಕರಾದ ಕೃಷ್ಣ ಉಕ್ಕುಂದ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕುಡಿಯುವ ನೀರಿನ ಸಮಸ್ಯೆಯಾಗದಂತೆ ಮುನ್ನೆಚ್ಚರಿಕೆ ವಹಿಸಿ: ರಾಹುಲ್ ರತ್ನಂ ಪಾಂಡೆಯ

ಕೊಪ್ಪಳ ಏಪ್ರಿಲ್ : ಕುಕನೂರ ಹಾಗೂ ಯಲಬುರ್ಗಾ ತಾಲೂಕಿನಲ್ಲಿ ಕುಡಿಯುವ ನೀರಿನ ಸಮಸ್ಯೆಯಾಗದಂತೆ ಮುನ್ನೆಚ್ಚರಿಕೆ ವಹಿಸಿ ಸಮರ್ಪಕವಾಗಿ ಜನರಿಗೆ ನೀರು ಒದಗಿಸಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಾಹುಲ್ ರತ್ನಂ ಪಾಂಡೆಯ ಹೇಳಿದರು.

ಯಲಬುರ್ಗಾ ತಾಲೂಕು ಪಂಚಾಯತ್ ಸಭಾಂಗಣದಲ್ಲಿ ಗುರುವಾರ ಯಲಬುರ್ಗಾ ಹಾಗೂ ಕುಕನೂರ ತಾಲೂಕು ಪಂಚಾಯತ್ ವತಿಯಿಂದ ಹಮ್ಮಿಕೊಂಡಿದ್ದ ಕುಡಿಯುವ ನೀರು ನಿರ್ವಹಣೆ, ಜೆಜೆಎಂ ಕಾಮಗಾರಿಗಳು, ನರೇಗಾ ಇತರೆ ವಿಷಯಗಳ ಕುರಿತು ಸಂಬಂಧಪಟ್ಟ ಇಲಾಖೆ ಅಧಿಕಾರಿಗಳು ಹಾಗೂ ಪಿಡಿಒರವರ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅವರು ಮಾತನಾಡಿದರು.

ಈ ಬಾರಿ ಬಿಸಿಲಿನ ಪ್ರಮಾಣ ಹೆಚ್ಚಿರುವುದರಿಂದ ಎಲ್ಲಿಯೂ ಕೂಡ ಜನ, ಜಾನುವಾರುಗಳಿಗೆ ಕುಡಿಯುವ ನೀರಿನ ಸಮಸ್ಯೆಯಾಗದಂತೆ ಮುನ್ನೆಚ್ಚರಿಕೆ ವಹಿಸಬೇಕು. ಗ್ರಾಮ ಪಂಚಾಯತಿಗಳಲ್ಲಿ ವಾರದಲ್ಲಿ ಎರಡು ಬಾರಿ ಸಭೆ ಮಾಡಿ ತಾಲೂಕು ಪಂಚಾಯತಿಗೆ ವರದಿ ಸಲ್ಲಿಸಬೇಕು. ತುರ್ತು ಕುಡಿಯುವ ನೀರಿನ ಸಮಸ್ಯೆ ಎದುರಾದಲ್ಲಿ ಮೇಲಾಧಿಕಾರಿಗಳ ಗಮನಕ್ಕೆ ತರಬೇಕು ಎಂದು ಸಲಹೆ ನೀಡಿದರು. ಈಗಾಗಲೇ ಎರಡು ತಾಲೂಕಿನಲ್ಲಿ ಜಲಜೀವನ್ ಮಿಷನ್ ಕಾಮಗಾರಿಗಳು ಮುಂದುವರೆದಿದ್ದು, ತುರ್ತಾಗಿ ಕಾಮಗಾರಿ ಮುಗಿಸಬೇಕು. ಸಕಾಲ ಅರ್ಜಿ ಮುಂತಾದವುಗಳನ್ನು ಕೂಡಲೇ ಪರಿಹರಿಸಬೇಕು ಎಂದರು.

ಬೇಸಿಗೆಯಲ್ಲಿ ನಿರಂತರವಾಗಿ ನರೇಗಾ ಯೋಜನೆಯಡಿ ಅಕುಶಲ ಕೂಲಿಕಾರ್ಮಿಕರಿಗೆ ಕೆಲಸ ಒದಗಿಸಬೇಕು. ರೈತರಿಗೆ ಸಾಮೂಹಿಕ ಹಾಗೂ ವೈಯಕ್ತಿಕ ಕಾಮಗಾರಿಗಳನ್ನು ಸಂಬಂಧಪಟ್ಟ ಇಲಾಖೆಯವರು ಕೊಟ್ಟು ಗ್ರಾಮದಲ್ಲೇ ಕೆಲಸ ಒದಗಿಸಿಕೊಡಬೇಕು. ಯೋಜನೆಯ ಸದುಪಯೋಗವಾಗಲು ಎಲ್ಲ ಪಿಡಿಒರವರು ಮುಂಜಾಗೃತೆ ವಹಿಸಬೇಕು ಎಂದರು.

ಸಭೆಯಲ್ಲಿ ಕಾರ್ಯನಿರ್ವಾಹಕ ಅಧಿಕಾರಿಗಳಾದ ಸಂತೋಷ ಬಿರಾದರ್ ಪಾಟೀಲ್, ಕಾರ್ಯ ನಿರ್ವಾಹಕ ಅಭಿಯಂತರರು ಗಾ.?ರಕು.ನ ಮತ್ತು ನೈ.ವಿ ಕೊಪ್ಪಳ ಮಹೇಶ್ ಶಾಸ್ತ್ರಿ, ಸಹಾಯಕ ಕಾರ್ಯಪಾಲಕ ಅಭಿಯಂತರರು ಗ್ರಾ.ಕು.ನ ಮತ್ತು ನೈ.ವಿ ಉಪ ವಿಭಾಗ ಯಲಬುರ್ಗಾ ರಿಜ್ವಾನ, ತಾ.ಪಂ ಸಹಾಯಕ ನಿರ್ದೇಶಕರಾದ ಹನಮಂತಗೌಡ ಪೋ.ಪಾಟೀಲ್, ಫಕೀರಪ್ಪ ಕಟ್ಟಿಮನಿ, ಶರಣಪ್ಪ ಕೆಳಗಿನಮನಿ, ಅನುಷ್ಠಾನ ಇಲಾಖೆಯ ಅಧಿಕಾರಿಗಳು, ಅವಳಿ ತಾಲೂಕಿನ ಎಲ್ಲಾ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ವಿಷಯ ನಿರ್ವಾಹಕರು, ನರೇಗಾ ಸಿಬ್ಬಂದಿಗಳು ಹಾಜರಿದ್ದರು.

# ಯಲಬುರ್ಗಾ: ಬಾಲ್ಯವಿವಾಹದಿಂದ ಬಾಲಕಿಯ ರಕ್ಷಣೆ

ಕೊಪ್ಪಳ, ಏಪ್ರಿಲ್ 18 : ಯಲಬುರ್ಗಾ ತಾಲ್ಲೂಕಿನ ಗಾಣದಾಳದಲ್ಲಿ ಏ.14 ರಂದು ನಡೆಯಬೇಕಿದ್ದ ಅಪ್ರಾಪ್ತ ಬಾಲಕಿಯ ವಿವಾಹವನ್ನು ತಹಶೀಲ್ದಾರರರ ನೇತೃತ್ವದ ತಂಡದಿಂದ ತಡೆಯಲಾಗಿದ್ದು, ಬಾಲಕಿಯ ರಕ್ಷಣೆ ಹಾಗೂ ಪೋಷಣೆಯ ಹಿತದೃಷ್ಠಿಯಿಂದ ಬಾಲಕಿಯನ್ನು ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿಗೆ ಹಾಜರು ಪಡಿಸಲಾಗಿದೆ.

ಯಲಬುರ್ಗಾ ತಾಲ್ಲೂಕಿನ ಗಾಣದಾಳ ಗ್ರಾಮದಲ್ಲಿ ಏಪ್ರಿಲ್ 14 ರಂದು ಅಪ್ರಾಪ್ತ ವಯಸ್ಸಿನ ಬಾಲಕಿಯೊಬ್ಬಳಿಗೆ ಬಾಲ್ಯ ವಿವಾಹವನ್ನು ಮಾಡಲಾಗುತ್ತಿದೆ ಎಂದು ಮಕ್ಕಳ ಸಹಾಯವಾಣಿ–1098/112ಗೆ ಮಾಹಿತಿಯು ಲಭ್ಯವಾದ ಹಿನ್ನೆಲೆಯಲ್ಲಿ ಬಾಲಕಿಯ ಶಾಲೆ ದಾಖಲಾತಿ ಪಡೆದು ಪರಿಶೀಲಿಸಲಾಗಿ ಬಾಲಕಿಯು ಅಪ್ರಾಪ್ತಳೆಂದು ಕಂಡುಬಂತು. ಏಪ್ರಿಲ್ 13 ರಂದು ಕನಕಗಿರಿ ತಾಲೂಕಿನ ಸೋಮಸಾಗರದಲ್ಲಿರುವ ಬಾಲಕಿಯ ಮನೆಗೆ ಭೇಟಿ ಮಾಡಿ ವಿಚಾರಿಸಲಾಗಿ ಮನೆಯಲ್ಲಿ ವಯೋವೃದ್ದ ಅಜ್ಜಿಯನ್ನು ಹೊರತುಪಡಿಸಿ ಬೇರೆ ಯಾರೂ ಇಲ್ಲದೇ ಇರುವುದನ್ನು ಗಮನಿಸಿ, ಬಾಲಕಿ ಹಾಗೂ ಮನೆಯವರು ಗ್ರಾಮದ ಹೆಸರು ಹೇಳಲು ಇಚ್ಛಿಸದೇ ಬೇರೆ ಗ್ರಾಮಕ್ಕೆ ಜಾತ್ರೆಗೆ ಹೋಗಿರುವುದಾಗಿ ತಿಳಿಸಿದಾಗ, ಬಾಲಕಿಯ ವಿವಾಹ ಮಾಡದೇ ಪೋಷಕರೊಂದಿಗೆ ಬಾಲಕಿಯನ್ನು ಮಕ್ಕಳ ಕಲ್ಯಾಣ ಸಮಿತಿ, ಕೊಪ್ಪಳಕ್ಕೆ ಹಾಜರುಪಡಿಸುವಂತೆ ಅಜ್ಜಿಗೆ ನೋಟೀಸ್ ನೀಡಲಾಯಿತು.

ಸ್ಥಳೀಯವಾಗಿ ವಿಚಾರಿಸಿದಾಗ ಬಾಲಕಿಯ ವಿವಾಹ ಮಾಡುವ ಕಾರಣದಿಂದಾಗಿಯೇ ವರನ ಊರಿಗೆ ಬಾಲಕಿಯನ್ನು ಕಳುಹಿಸಿರುವ ಬಗ್ಗೆ ಸ್ಥಳೀಕರು ನೀಡಿದ ಮಾಹಿತಿಯ ಮೇರೆಗೆ ತಹಶೀಲ್ದಾರರು ಯಲಬುರ್ಗಾ, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಯಲಬುರ್ಗಾ, ಅಂಗನವಾಡಿ ಮೇಲ್ವಿಚಾರಕಿಯರು, ಗ್ರಾಮ ಪಂಚಾಯತ ಸದಸ್ಯರು/ ಸಿಬ್ಬಂದಿಗಳು, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಮಕ್ಕಳ ಸಹಾಯವಾಣಿ ಸಿಬ್ಬಂದಿಗಳು ಮತ್ತು ಪೊಲೀಸ್ ಇಲಾಖೆಯ 112 ಸಿಬ್ಬಂದಿಗಳನ್ನೊಳಗೊಂಡ ತಂಡ ತಡರಾತ್ರಿಯಾಗಿದ್ದರೂ ಹೇಗಾದರೂ ಮಾಡಿ ಬಾಲ್ಯವಿವಾಹವನ್ನು ತಡೆಯಬೇಕೆಂಬ ಉದ್ದೇಶದಿಂದ ವರನ ಮನೆಗೆ ದಿಢೀರ್ ಭೇಟಿ ನೀಡಿ ವರನ ಕುಟುಂಬದವರನ್ನು ಬಾಲಕಿಯ ಕುರಿತು ವಿಚಾರಿಸಿದಾಗ ಅಲ್ಲಿಯೂ ಬಾಲಕಿ ಇಲ್ಲದೇ ಇರುವುದು ಗಮನಕ್ಕೆ ಬಂದಿರುತ್ತದೆ.

ಆದರೆ ಅಲ್ಲಿ ಮದುವೆಯ ಎಲ್ಲಾ ಸಿದ್ದತೆಗಳು ನಡೆದಿರುವುದು ಗಮನಿಸಿದಾಗ ಬಾಲಕಿಯನ್ನು ಅಜ್ಞಾತ ಸ್ಥಳದಲ್ಲಿಟ್ಟು ಗೌಪ್ಯವಾಗಿ ವಿವಾಹ ಮಾಡುವ ಉದ್ದೇಶವಿರಬಹುದೆಂದು ತಿಳಿದು, ಬಾಲಕಿ ಅಥವಾ ಬಾಲಕಿ ಇರುವ ಸ್ಥಳದ ಕುರಿತು ವರ ಹಾಗೂ ವರನ ಕುಟುಂಬದವರಿಗೆ ಮಾಹಿತಿ ನೀಡುವಂತೆ ಕೇಳಿದಾಗ ಹಾರಿಕೆ ಉತ್ತರ ನೀಡಿ ಯಾವುದೇ ರೀತಿಯ ಸುಳಿವು ನೀಡಿರುವುದಿಲ್ಲ. ಆಗ ವರ ಹಾಗೂ ವರನ ಕುಟುಂಬದವರಿಗೆ ಬಾಲ್ಯ ವಿವಾಹ ನಿಷೇಧ ಕಾಯ್ದೆ–2006 ಹಾಗೂ ತಿದ್ದುಪಡಿ 2016ರ ಬಗ್ಗೆ ಮತ್ತು ಬಾಲ್ಯ ವಿವಾಹದಿಂದ ಆಗುವ ದುಷ್ಪರಿಣಾಮಗಳ ಕುರಿತು ಅರಿವು ಮೂಡಿಸಿ ಎಚ್ಚರಿಕೆ ನೀಡಲಾಯಿತು. ಬಾಲ್ಯ ವಿವಾಹ ತಡೆಯುವ ಉದ್ದೇಶದಿಂದ ಮದುವೆ ನಡೆಯುವ ಸ್ಥಳದಲ್ಲಿ ಗ್ರಾಮ ಪಂಚಾಯತ್ ಸದಸ್ಯರಿಗೆ ಅದೇ ರೀತಿ ಬಾಲಕಿಯ ಮನೆಯ ಕಡೆಗೆ ಕಂದಾಯ ಇಲಾಖೆ ಹಾಗೂ ಶಿಕ್ಷಣ ಇಲಾಖೆಯ ಸಿಬ್ಬಂದಿಗಳಿಗೆ ತೀಕ್ಷ ?ಣ ನಿಗಾವಹಿಸಿ ಮಾಹಿತಿ ನೀಡುವಂತೆ ತಹಶೀಲ್ದಾರರು ಯಲಬುರ್ಗಾರವರು ಜವಾಬ್ದಾರಿ ವಹಿಸಿಕೊಟ್ಟು ಬಂದರು. ಬಳಿಕ ಮರುದಿನ ಏ.14 ರಂದು ಬೆಳಿಗ್ಗೆ 5:30ಕ್ಕೆ ಬಾಲಕಿಯ ಮನೆಯಲ್ಲಿ ಪೋಷಕರೊಂದಿಗೆ ಬಾಲಕಿ ಪ್ರತ್ಯಕ್ಷವಾದಾಗ ಅಲ್ಲಿಯೇ ಇದ್ದ ಬಾಲ್ಯ ವಿವಾಹ ನಿಷೇಧ ತಂಡದವರು ಬಾಲಕಿಗೆ 18 ವರ್ಷ ಪೂರ್ಣಗೊಳ್ಳದ ಕಾರಣ ಬಾಲಕಿಯನ್ನು ರಕ್ಷಿಸಿ, ಪೋಷಣೆ ಮತ್ತು ರಕ್ಷಣೆ ಹಿತದೃಷ್ಠಿಯಿಂದ ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿ, ಕೊಪ್ಪಳಕ್ಕೆ ಹಾಜರುಪಡಿಸಲು ಕ್ರಮವಹಿಸಿದರು. ಇಲ್ಲಿ ಬಾಲ್ಯವಿವಾಹದಿಂದ ಬಾಲಕಿಯನ್ನು ರಕ್ಷಣೆ ಮಾಡುವಲ್ಲಿ ತಹಶೀಲ್ದಾರ ಯಲಬುರ್ಗಾ, ಶಿಶುಅಭಿವೃದ್ಧಿ ಯೋಜನಾಧಿಕಾರಿ ಯಲಬುರ್ಗಾ, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಸಿಬ್ಬಂದಿಗಳು ಹಾಗೂ ತಾಲೂಕು ಮತ್ತು ಗ್ರಾಮ ಮಟ್ಟದ ಬಾಲ್ಯವಿವಾಹ ನಿಷೇದಾಧಿಕಾರಿಗಳ ತಂಡ ಚುನಾವಣಾ ಕರ್ತವ್ಯದ ಜೊತೆಗೆ ಸಾಂದರ್ಭಿಕವಾಗಿ ಕೈಗೊಂಡ ಕಾರ್ಯಾಚರಣೆ ಎಲ್ಲರ ಮೆಚ್ಚುಗೆಗೆ ಪಾತ್ರವಾಗಿದೆ ಎಂದು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹಳ್ಳಿ ಹಳ್ಳಿಗಳಲ್ಲಿ ಮತ್ತೊಮ್ಮೆ ಮೋದಿ ಸಂಕಲ್ಪ– ಕ್ಯಾವಟರ್

ಮಸ್ಕಿ: ಹಳ್ಳಿ ಹಳ್ಳಿಗಳಲ್ಲಿ ಮೋದಿ ಮತ್ತೊಮ್ಮೆ ಎಂಬ ಸಂಕಲ್ಪ ಧೃಢವಾಗಿದೆ. ಆದ್ದರಿಂದ ಮೂರನೇ ಬಾರಿಗೆ ಕೇಂದ್ರದಲ್ಲಿ ಬಿಜೆಪಿ ಆಡಳಿತ ನಡೆಸಲಿದೆ ಎಂದು ಕೊಪ್ಪಳ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಡಾ.ಬಸವರಾಜ ಕ್ಯಾವಟರ್ ವಿಶ್ವಾಸ ವ್ಯಕ್ತಪಡಿಸಿದರು.



ಬಳಗಾನೂರಿನ ದೇವಾಂಗ ಸಮುದಾಯ ಭವನದಲ್ಲಿ ನಡೆದ ಬಳಗಾನೂರು ಪಟ್ಟಣ ಮತ್ತು ಗೌಡನಬಾವಿ ಪಂಚಾಯತಿ ವ್ಯಾಪ್ತಿಯ ಚುನಾವಣಾ ಸಭೆಯಲ್ಲಿ ಭಾಗವಹಿಸಿ ಮಾತನಾಡಿದರು.

ಕಳೆದ ಹತ್ತು ವರ್ಷಗಳಲ್ಲಿ ಕೇಂದ್ರ ಸರ್ಕಾರ ನೀಡಿರುವ ಜನಪರ ಯೋಜನೆಗಳು ಜನತೆಯ ಹೃದಯದಲ್ಲಿ ಸ್ಥಾನ ಪಡೆದಿವೆ. ಹೆಮ್ಮೆಯ ಪ್ರಧಾನ ನರೇಂದ್ರ ಮೋದಿಜೀ ಅವರ ಸ್ವಚ್ಛ, ಸಧೃಢ ಆಡಳಿತಕ್ಕೆ ಕೊಪ್ಪಳ ಲೋಕಸಭಾ ಕ್ಷೇತ್ರದ ಜನತೆಯೂ ಆಶೀರ್ವಾದ ಮಾಡಲಿದ್ದಾರೆ ಎಂಬುದನ್ನು ಸ್ವತಃ ಜನರೇ ನನ್ನಲ್ಲಿ ತಿಳಿಸಿದ್ದಾರೆ ಎಂದರು.

ಪ್ರಧಾನಮಂತ್ರಿ ನರೇಂದ್ರ ಮೋದಿಯವರ ಆಡಳಿತ ಜನರು ಮೆಚ್ಚಿದ್ದಾರೆ. ಮತ್ತೊಮ್ಮೆ ಅವರ ನೇತೃತ್ವದ ಸರ್ಕಾರ ಬರಬೇಕು ಎಂದು ಬಯಸಿದ್ದಾರೆ. ನಮ್ಮ ಮನೆಯ ಮಗನಾದ ನನಗೆ ಮತ ಹಾಕುವ ಮೂಲಕ ಮೋದಿಯವರ ಕೈ ಬಲ ಪಡಿಸಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಮಸ್ಕಿ ಬಿಜೆಪಿ ಮಂಡಲದ ಅಧ್ಯಕ ಶರಣಬಸವ ಸೊಪ್ಪಿಮಠ, ಮಾಜಿ ಸಂಸದ ಕೆ.ವಿರೂಪಾಕ್ಷಪ್ಪ, ಶಿವರಾಮೇಗೌಡ, ಮಾಜಿ ಶಾಸಕ ಪ್ರತಾಪಗೌಡ ಪಾಟೀಲ, ಲೋಕಸಭಾ ಸಂಚಾಲಕ ಹೆಚ್.ಗಿರಿಗೌಡ್ರು, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸಂತೋಷ ರಾಜಗುರು, ಜೆ.ಡಿ.ಎಸ್ ಮುಖಂಡ ರಾಘವೇಂದ್ರ ನಾಯಕ, ಜೆ.ಡಿ.ಎಸ್ ತಾಲೂಕು ಅಧ್ಯಕ್ಷ ಮಲ್ಲಿಕಾರ್ಜುನ ಬಾವಿಕಟ್ಟಿ, ಬಿಜೆಪಿ ಓ.ಬಿ.ಸಿ ಮೋರ್ಚಾ ಅಧ್ಯಕ್ಷ ಅಮರೇಶ ಗುರಿಕಾರ, ಬಿಜೆಪಿ ಎಸ್.ಸಿ.ಮೋರ್ಚಾ ಅಧ್ಯಕ್ಷ ರವಿ ಬಳಗಾನೂರ, ಮುಖಂಡರಾದ ಅಜಯ ಉದ್ಬಾಳ, ದೊಡ್ಡಮೌನೇಶ ಗೌಡ, ಭೀಮಣ್ಣ ಬಡಿಗೇರ, ಡಾ.ಬಸಲಿಂಗಪ್ಪ, ಹೆಚ್ ಮಹಾಬಲೇಶ, ವೀರಣ್ಣರವರು ಉಪಸ್ಥಿತರಿದ್ದರು.

## ಚಿಕ್ಕೋಡಿ ಲೋಕಸಭಾ ಮತಕ್ಷೇತ್ರ 20 ಅಭ್ಯರ್ಥಿಗಳಿಂದ 27 ನಾಮಪತ್ರ ಸಲ್ಲಿಕೆ

(1 ನೇ ಪುಟದಿಂದ)

ಪಕ್ಷೇತರ ಅಭ್ಯರ್ಥಿಗಳಾಗಿ ಜಿತೇಂದ್ರ ಸುಭಾಷ ನೇರ್ಲೆ–1, ಕಾಶಿನಾಥ ಕುರಣಿ–1, ಮಹೇಶ ಅಶೋಕ–1, ಗಜಾನನ ಪೂಜಾರಿ–2,ಭೀಮಸೇನ ಸನದಿ–1, ಸಮ್ಮೇದ ಸರದಾರ ವರ್ಧಮಾನೆ–1, ವಿಲಾಸ ಮಣ್ಣೂರ–1, ಶಂಭು ಕಲ್ಲೋಳಿಕರ–2,ಮೋಹನ ಮೊಟನ್ನವರ–1, ಮಗದುಮ ಇಸ್ಮಾಯಿಲ್ ಮಗದುಮ–1,ಶ್ರೀಣಿಕ ಅಣ್ಣಾಸಾಹೇಬ ಜಂಗಟೆ–1,ರಾಜು ವಿಜಯ ಸೊಲ್ಲಾಪುರೆ–1,ಯಾಸೀನ ಸಿರಾಜುದ್ದಿನ ಪಟಕಿ–1 ಅವರುಗಳು ಉಮೇದುವಾರಿಕೆಯನ್ನು ಸಲ್ಲಸಿರುತ್ತಾರೆ.

ಎ. 20 ರಂದು ನಾಮಪತ್ರಗಳ ಪರಿಶೀಲನೆ ಜರುಗಲಿದ್ದು, ಎ. 22 ರಂದು ಮಧ್ಯಾಹ್ನ 3 ಗಂಟೆಯೊಳಗಾಗಿ ನಾಮಪತ್ರಗಳನ್ನು ಹಿಂಪಡೆಯಬಹುದಾಗಿರುತ್ತದೆ ಎಂದು ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಚುನಾವಣಾಧಿಕಾರಿ ರಾಹುಲ ಶಿಂಧೆ ಅವರು ತಿಳಿಸಿರುತ್ತಾರೆ.

# ಹುಲಿಗೆಮ್ಮ ದೇವಸ್ಥಾನ ಅಭಿವೃದ್ಧಿಗೆ ವಿಶೇಷ ಅನುದಾನ ತರುವೆ: ಡಾ.ಬಸವರಾಜ

ಕೊಪ್ಪಳ: ಕಲ್ಯಾಣ ಕರ್ನಾಟಕ ಭಾಗದ ಶಕ್ತಿ ದೇವತೆ ಹಾಗೂ ಸುಪ್ರಸಿದ್ಧ ಧಾರ್ಮಿಕ ಸ್ಥಳವಾದ ಹುಲಿಗಿಯ ಹುಲಿಗೆಮ್ಮದೇವಿ ಸನ್ನಿಧಾನಕ್ಕೆ ಕೊಪ್ಪಳ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ತೆರಳಿ ವಿಶೇಷ ಪೂಜೆ ಸಲ್ಲಿಸಿದರು.



ಈ ಸಂದರ್ಭದಲ್ಲಿ ಮಾತನಾಡಿದ ಅವರು, ಕರ್ನಾಟಕವಷ್ಟೇ ಅಲ್ಲದೇ ನೆರೆರಾಜ್ಯಗಳಿಂದ ಭಕ್ತರು ಹುಲಿಗೆಮ್ಮದೇವಿಯ ದರ್ಶನಕ್ಕೆ ಆಗಮಿಸುತ್ತಾರೆ. ಭಕ್ತರ ಸಂಖ್ಯೆಗೆ ಅನುಗುಣವಾಗಿ ಮೂಲಸೌಕರ್ಯ ಅಭಿವೃದ್ಧಿ ಮಾಡುವ ಸಂಕಲ್ಪ ಮಾಡಿದ್ದೇನೆ. ಹುಲಿಗೆಮ್ಮದೇವಿಯ ಆಶೀರ್ವಾದ, ಜನರ ಸಹಕಾರ ಅಗತ್ಯ ಎಂದರು.

ಶ್ರೀಕ್ಷೇತ್ರವು ರಾಜ್ಯ ಸರ್ಕಾರಕ್ಕೆ ನೂರಾರು ಕೋಟಿ ರೂ. ಆದಾಯ ತರುತ್ತಿದೆ. ಆದರೆ, ನಿರೀಕ್ಷಿತ ಮಟ್ಟದಲ್ಲಿ ಅಭಿವೃದ್ಧಿ ಆಗಿಲ್ಲ. ಕಳೆದ ಅಧಿವೇಶನದಲ್ಲಿ ಹುಲಿಗೆಮ್ಮ ಅಭಿವೃದ್ಧಿ ಪ್ರಾಧಿಕಾರ ರಚಿಸಲಾಗಿದೆ. ಆದರೆ, ಅಭಿವೃದ್ಧಿ ರೂಪುರೇಷೆ ಇನ್ನು ಸಿದ್ಧವಾಗಿಲ್ಲ.

ಪ್ರಧಾನಮಂತ್ರಿ ನರೇಂದ್ರ ಮೋದಿ ನೇತೃತ್ವದ ಬಿಜೆಪಿ ಸರ್ಕಾರ ಮತ್ತೊಮ್ಮೆ ಅಧಿಕಾರಕ್ಕೆ ಬಂದರೆ, ಹುಲಿಗೆಮ್ಮ ದೇವಸ್ಥಾನ ಅಭಿವೃದ್ಧಿಗೆ ವಿಶೇಷ ಅನುದಾನ ತಂದು ಅಭಿವೃದ್ಧಿ ಪಡಿಸುವೆ ಎಂದು ಭರವಸೆ ನೀಡಿದರು. ಈ ಸಂದರ್ಭದಲ್ಲಿ ಪಕ್ಷದ ಪ್ರಮುಖರು, ಕಾರ್ಯಕರ್ತರು ಜೊತೆಗಿದ್ದರು.

# ಮತದಾನ ಮಹತ್ವ ಕುರಿತು ಜಾಗೃತಿ ಏ 22 ರಿಂದ ಟೆನಿಸ್ ಬಾಲ್ ಕ್ರಿಕೆಟ್ ಪಂದ್ಯಾವಳಿ

ಗದಗ ಏಪ್ರಿಲ್ 19: ಲೋಕಸಭಾ ಚುನಾವಣೆ–2024 ರ ನಿಮಿತ್ತ ಗದಗ ಜಿಲ್ಲಾ ಸ್ವೀಪ್ ಸಮಿತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ಏಪ್ರಿಲ್ 22 ರಿಂದ 27 ರವರೆಗೆ ಟೆನಿಸ್ ಬಾಲ್ ಕ್ರಿಕೆಟ್ ಪಂದ್ಯಾವಳಿ ಆಯೋಜಿಸಲಾಗಿದೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ಶರಣು ಗೋಗೇರಿ ಅವರು ತಿಳಿಸಿದ್ದಾರೆ.

ಏಪ್ರಿಲ್ 22 ರಂದು ಮಧ್ಯಾಹ್ನ 2 ಗಂಟೆಗೆ ಶಿರಹಟ್ಟಿ ತಾಲೂಕು ಕ್ರೀಡಾಂಗಣದಲ್ಲಿ ಪಂಚಾಯತ್ ರಾಜ್ ಮತ್ತು ಆರೋಗ್ಯ ಇಲಾಖೆ ನಡುವೆ, ಏಪ್ರಿಲ್ 23 ರಂದು ಮಧ್ಯಾಹ್ನ 2 ಗಂಟೆಗೆ ಮುಂಡರಗಿ ತಾಲೂಕು ಕ್ರೀಡಾಂಗಣದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಮತ್ತು ಶಿಕ್ಷಣ ಇಲಾಖೆ, ಏಪ್ರಿಲ್ 24 ರಂದು ಮಧ್ಯಾಹ್ನ 2 ಗಂಟೆಗೆ ರೋಣ ತಾಲೂಕು ಕ್ರೀಡಾಂಗಣದಲ್ಲಿ ಮಾಧ್ಯಮ ತಂಡದವರೊಂದಿಗೆ 1 ನೇ ನಾಕೌಟ್ ವಿಜೇತ ತಂಡ, ಏಪ್ರಿಲ್ 25 ರಂದು ನರಗುಂದ ತಾಲೂಕು ಕ್ರೀಡಾಂಗಣದಲ್ಲಿ ಕಂದಾಯ ಇಲಾಖೆ ಮತ್ತು 2 ನೇ ನಾಕೌಟ್ ವಿಜೇತ ತಂಡ, ಏಪ್ರಿಲ್ 27 ರಂದು ಮ 2 ಗಂಟೆಗೆ ಗದಗ ವಿ.ಡಿ.ಎಸ್.ಟಿ ಶಾಲೆಯ ಮೈದಾನದಲ್ಲಿ ಫೈನಲ್ ತಂಡ–1 ಮತ್ತು ಫೈನಲ್ ತಂಡ–2. ಈ ತಂಡಗಳ ನಡುವೆ ಟೆನಿಸ್ ಬಾಲ್ ಕ್ರಿಕೆಟ್ ಪಂದ್ಯಾವಳಿ ನಡೆಯಲಿದೆ ಎಂದು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

ಆಯಾಯ ತಂಡದ ಪಂದ್ಯಗಳು ಜರುಗುವ ದಿನಗಳಂದು ಕ್ರೀಡಾಪಟುಗಳು ಸರಿಯಾದ ಸಮಯಕ್ಕೆ ಮೈದಾನಕ್ಕೆ ಆಗಮಿಸಬೇಕೆಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ಶರಣು ಗೋಗೇರಿ ಅವರು ಕೋರಿದ್ದಾರೆ.

## ಪರಿಸರ ಸಾರ್ವಜನಿಕ ಆಲಿಕೆ ಸಭೆ ಮುಂದೂಡಿಕೆ

ಬೆಳಗಾವಿ.ಏ.19 : ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ವತಿಯಿಂದ ಆರ್. ಎಸ್. ಪಾಟೀಲ್ ಇವರು ಬೆಳಗಾವಿ ಜಿಲ್ಲೆಯ ರಾಯಬಾಗ ತಾಲೂಕಿನ ಯಡ್ರಾಮಿ ಗ್ರಾಮದ ಸರ್ವೆ ನಂಬರ್ 64/2ಅ ಒಟ್ಟು 0.668 ಹೆಕ್ಟೇರ್ ಪ್ರದೇಶದಲ್ಲಿ ವಾರ್ಷಿಕ 32,381 ಟನ್ ಕಟ್ಟಡ ಕಲ್ಲು ಗಣಿಗಾರಿಕೆ ಘಟಕ ಸ್ಥಾಪಿಸಲು ಉದ್ದೇಶಿಸಿದೆ. ಸದರಿ ಏ.15 ರಂದು ನಡೆಯಬೇಕಿದ ಕೈಗಾರಿಕೆ ಆಲಿಕೆ ಸಭೆಯು ಮುಂದೂಡಲಾಗಿದೆ.

ಕೃಷ್ಣಾ ಸಹಕಾರಿ ಸಕ್ಕರೆ ಕಾರ್ಖಾನೆ ನಿಯಮಿತ ಇವರು ಬೆಳಗಾವಿ ಜಿಲ್ಲೆಯ ಅಥಣಿ ತಾಲೂಕಿನ ಸಂಕೋನಟ್ಟಿ ಗ್ರಾಮದ ಸರ್ವೆ ನಂಬರ್ 1141, 1142, 1143, 1136, 1137, 225 ಮತ್ತು 226, ಹಾಲಿ ಇರುವ ಸಕ್ಕರೆ ಘಟಕದ ಆವರಣದಲ್ಲಿ ಎಥನಾಲ್ ಉತ್ಪಾಧಿಸಲು 150 ಕೆಎಲ್‌ಪಿಡಿ ಸಾಮರ್ಥ್ಯದ ಡಿಸ್ಟಿಲರಿಯನ್ನು ಸ್ಥಾಪಿಸುವುದು ಹಾಗೂ 2.5 ಮೆಗಾವ್ಯಾಟ್ ಸಾಮರ್ಥ್ಯ ಸಹ ವಿದ್ಯುತ್ ಘಟಕನ್ನು ಸ್ಥಾಪಿಸಲು ಉದ್ದೇಶಿಸಿದೆ.

ಸದರಿ ಕೈಗಾರಿಕ ಆಲಿಕೆ ಸಭೆ ಏ.17 ರಂದು ನಡೆತಬೇಕಿದ ಸಭೆ ಮುಂದೂಡಲಾಗಿದೆ ಎಂದು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರನ ಮಂಡಳಿಯ ಪರಿಸರ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನೇಹಾ ಹಿರೇಮಠ ಕೊಲೆ ಪ್ರಕರಣ ಖಂಡಿಸಿ ಎಬಿವಿಪಿ ಪ್ರತಿಭಟನೆ

(1 ನೇ ಪುಟದಿಂದ)

ಮಾಡಿರುವ ಘಟನೆ ನಿಜಕ್ಕೂ ವಿದ್ಯಾರ್ಥಿ ಸಮುದಾಯದಲ್ಲಿ ಭಯದ ವಾತಾವರಣ ಮೂ ಡಿಸಿದೆ. ಕೆಎಲ್‌ಇ ತಾಂತ್ರಿಕ ವಿಶ್ವವಿದ್ಯಾ ಲಯದಲ್ಲಿ ಎಂಸಿಎ ವಿದ್ಯಾ ಭ್ಯಾಸ ಮಾಡು ತ್ತಿದ್ದ ವಿದ್ಯಾರ್ಥಿನಿ ನೇಹಾ ಅವಳನ್ನು ಲವ್ ಜಿಹಾದಿ ಕ್ರೂರ ಮನಸ್ಥಿತಿಯ ಫಯಾಜ್ ಲವ್ ಜಿಹಾದಿಯಾಗಿ ಅವಳನ್ನು ಪ್ರೀತಿಸುವಂತೆ ಒತ್ತಾಯಿಸುತ್ತಿದ್ದ, ಅವನ ಪ್ರೀತಿಯನ್ನು ನಿರಾಕರಿಸಿದ್ದಕ್ಕೆ ಕಾಲೇಜಿಗೆ ಅಕ್ರಮವಾಗಿ ಬಂದು ಚಾಕುವಿನಿಂದ 9 ಬಾರಿ ಇರಿದು ಬರ್ಬರವಾಗಿ ಹತ್ಯೆ ಮಾಡಿ ರುವುದು ನಾಗರಿಕ ಸಮಾಜ ತಲೆ ತಗ್ಗಿಸುವಂತೆ ಮಾಡಿದೆ ಎಂದು ದೂರಿದರು.

ರಾಜಾರೊ ೀಷವಾಗಿ ಕಾಲೇಜಿನ ಕ್ಯಾಂಪಸ್‌ಗೆ ನುಗ್ಗಿ ಹತ್ಯೆ ಮಾಡುವ ಕೊಲೆಗಾರನಿಗೆ ಕಾನೂನಿನ ಭಯ ಇಲ್ಲದಂತಾಗಿದೆ ಎನ್ನುವುದು ಈ ಘಟನೆಯಿಂದ ತಿಳಿದು ಬರುತ್ತಿದೆ. ಪೊಲೀಸ್ ಇಲಾಖೆ ಆರೋಪಿಗೆ ಕಠಿಣ ಶಿಕ್ಷೆ ನೀಡಬೇಕೆಂದು ಒತ್ತಾಯಿಸಿದರು. ದಿನದಿಂದ ದಿನಕ್ಕೆ ಹದಗೇಡು ತ್ತುರುವ ಕಾನೂನು ಸುವ್ಯವಸ್ಥೆಯ ಬಗ್ಗೆ ರಾಜ್ಯ ಸರಕಾರ ಗಂಭೀರ ಚಿಂತನೆ ನಡೆಸಬೇಕಿದೆ. ಇಂಥ ಆರೋ ಪಿಗಳಿಗೆ ಕಠಿಣ ಶಿಕ್ಷೆ ಕೊಡಿಸ ಬೇಕು ಎಂದು ಆಗ್ರಹಿ ಸಿದರು. ರೋಹಿತ್ ಅಲಕುಂಟೆ, ಪ್ರಶಾಂತ ಶೆಲ್ಲಿಕೆರಿ, ರೋಹಿತ್ ಉಮನಾಬಾದಿಮಠ, ಸಚಿನ ಹಿರೇಮಠ, ಅಮೂಲ್ಯ ಗೌಡರ, ಪ್ರಜ್ವಲ್ ಅಣ್ಣಿಗೇರಿ, ಮಲ್ಲಿಕಾ ರ್ಜುನ ಪೂಜಾರಿ ಸೇರಿದಂತೆ ಇನ್ನತರರು ಉಪಸ್ಥಿತರಿದ್ದರು.

## ಏ.21 ರಂದು ಭಗವಾನ ಶ್ರೀ ಮಹಾವೀರ ಜಯಂತಿ

ಧಾರವಾಡ ಮಾರ್ಚ್.: ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ಭಗವಾನ ಶ್ರೀ ಮಹಾವೀರ ಜಯಂತಿಯನ್ನು ಏಪ್ರಿಲ್ 21, 2024 ರಂದು ಬೆಳಗ್ಗೆ 11 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿಯ ನೂತನ ಸಭಾಭವನದಲ್ಲಿ ಆಯೋಜಿಸಲಾಗಿದೆ.

ಲೋಕಸಭಾ ಚುನಾವಣೆಯ ನೀತಿ ಸಂಹಿತೆ ಜಾರಿಯಲ್ಲಿ ಇರುವುದರಿಂದ ಭಗವಾನ ಶ್ರೀ ಮಹಾವೀರ ಜಯಂತಿ ಕಾರ್ಯಕ್ರಮವನ್ನು ಸರಳವಾಗಿ ಆಚರಿಸಲಾಗುವುದು. ಕಾರ್ಯಕ್ರಮಕ್ಕೆ ಜಿಲ್ಲಾಮಟ್ಟದ ಅಧಿಕಾರಿಗಳು, ಸಾರ್ವಜನಕರು ಆಗಮಿಸಬೇಕೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.